ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 ಸಂಚಿಕೆ: 130 ರಾಯಚೂರು 01-11-2026 ಭಾನುವಾರ ಪುಟ : 04 ಬೆಲೆ: ₹ 2.00 Postal Reg No.: RCR/L/RNP/95/2025-27 ಸಂಪಾದಕರು : ಗುರುರಾಜ ಕೆ

Vol: 04 Issue: 130 Raichur 01-11-2026 Sunday Page: 04 Price: ₹ 2.00 tungabimba@gmail.com Editor: Gururaja K 98863 85685



ಅಭಿವೃದ್ಧಿ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ: ಶಾಸಕ ಬಸನಗೌಡ ದದ್ದಲ್



ರಾಯಚೂರು: ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮೂಲಕ ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅಧಿಕಾರಿಗಳಿಗೆ ಸೂಚಿಸಿದರು.

ರಾಯಚೂರು ತಾಲೂಕು ಪಂಚಾಯಿತಿಯ 9ನೇ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ (ಕೆಡಿಪಿ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ 2026-27ನೇ ಸಾಲಿನ ವಿವಿಧ ಇಲಾಖೆಗಳ ಕಾರ್ಯಪ್ರಗತಿ, ಸರ್ಕಾರದ ಯೋಜನೆಗಳ ಅನುಷ್ಠಾನ, ಅಭಿವೃದ್ಧಿ ಕಾಮಗಾರಿಗಳ ಸ್ಥಿತಿಗತಿ ಹಾಗೂ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ಸೇವೆಗಳ ಕುರಿತು ಇಲಾಖಾವಾರು ಪರಿಶೀಲನೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಸಾರ್ವಜನಿಕರು ತಮ್ಮ ಸಮಸ್ಯೆಗಳು ಹಾಗೂ ಅಹವಾಲುಗಳೊಂದಿಗೆ ಸರ್ಕಾರಿ ಕಚೇರಿಗಳಿಗೆ ಭೇಟಿ ನೀಡಿದಾಗ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಬೇಕು. ಅನಗತ್ಯ ವಿಳಂಬ ಮಾಡದೆ ಅಗತ್ಯ ಸೇವೆಗಳನ್ನು ಒದಗಿಸಬೇಕು. ಜನಸಾಮಾನ್ಯರು ಸಣ್ಣಪುಟ್ಟ ಕೆಲಸಗಳಿಗೂ ಪದೇಪದೇ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗದಂತೆ ಎಚ್ಚರ ವಹಿಸಬೇಕು ಎಂದು ತಿಳಿಸಿದರು.

ವಿಶೇಷವಾಗಿ ರೈತರ ಸಮಸ್ಯೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಕೃಷಿ ಚಟುವಟಿಕೆಗಳಿಗೆ ಸಂಬಂಧಿಸಿದ ತೊಂದರೆಗಳನ್ನು ಪರಿಹರಿಸಲು ಕೃಷಿ, ಕಂದಾಯ ಹಾಗೂ ನೀರಾವರಿ ಇಲಾಖೆಗಳ ಅಧಿಕಾರಿಗಳು ರೈತರೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕು. ಪರಸ್ಪರ ಸಮನ್ವಯ ಸಾಧಿಸುವ ಮೂಲಕ ರೈತರಿಗೆ ಅಗತ್ಯ ಮಾರ್ಗದರ್ಶನ ಮತ್ತು ನೆರವು ಒದಗಿಸಬೇಕು ಎಂದು ಸೂಚಿಸಿದರು.

ಸರ್ಕಾರದಿಂದ ಜಾರಿಗೊಳ್ಳುವ ಕೃಷಿ ಹಾಗೂ ರೈತಪರ ಯೋಜನೆಗಳ ಕುರಿತು ರೈತರಿಗೆ ಮುಂಚಿತವಾಗಿಯೇ ಮಾಹಿತಿ ನೀಡಬೇಕು. ಯೋಜನೆಗಳ ಅರ್ಹತೆ, ಅರ್ಜಿ ಸಲ್ಲಿಸುವ ವಿಧಾನ ಹಾಗೂ ದೊರೆಯುವ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಯಾವುದೇ ಅರ್ಹ ರೈತರು ಸರ್ಕಾರದ ಯೋಜನೆಗಳಿಂದ ವಂಚಿತರಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು, ರಸ್ತೆ, ಸ್ವಚ್ಛತೆ, ವಿದ್ಯುತ್ ಹಾಗೂ ಇತರ ಮೂಲಸೌಕರ್ಯಗಳ ಕೊರತೆಯಿಂದ ಸಾರ್ವಜನಿಕರು ತೊಂದರೆ ಅನುಭವಿಸದಂತೆ ಕ್ರಮ ಕೈಗೊಳ್ಳಬೇಕು. ಗ್ರಾಮಸ್ಥರಿಂದ ಬರುವ ದೂರುಗಳನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟ ಇಲಾಖೆಗಳು ತ್ವರಿತ ಪರಿಹಾರ ಒದಗಿಸಬೇಕು ಎಂದು ನಿರ್ದೇಶನ ನೀಡಿದರು.

ಕೃಷಿ, ನೀರಾವರಿ, ಕಂದಾಯ, ಗ್ರಾಮೀಣಾಭಿವೃದ್ಧಿ, ಶಿಕ್ಷಣ ಮತ್ತು ಆರೋಗ್ಯ ಸೇರಿದಂತೆ ವಿವಿಧ ಇಲಾಖೆಗಳ ಕಾರ್ಯಚಟುವಟಿಕೆಗಳ ಕುರಿತು ಚರ್ಚಿಸಿದ ಶಾಸಕರು, ಸರ್ಕಾರದ ಅನುದಾನವನ್ನು ನಿಗದಿತ ಉದ್ದೇಶಗಳಿಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕು. ಅಭಿವೃದ್ಧಿ ಕಾಮಗಾರಿಗಳಲ್ಲಿ ಗುಣಮಟ್ಟ ಕಾಪಾಡುವುದರ ಜೊತೆಗೆ ನಿಗದಿತ ಕಾಲಮಿತಿಯೊಳಗೆ ಕೆಲಸಗಳನ್ನು ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಸರ್ಕಾರದ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಇಲಾಖೆಗಳ ನಡುವಿನ ಸಮನ್ವಯ ಅತ್ಯಗತ್ಯವಾಗಿದೆ. ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿ, ಗ್ರಾಮೀಣ ಜನರ ಜೀವನಮಟ್ಟ ಸುಧಾರಣೆಗೆ ಆದ್ಯತೆ ನೀಡಬೇಕು. ಜನಪರ ಆಡಳಿತದ ಮೂಲಕ ಸರ್ಕಾರದ ಸೌಲಭ್ಯಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪುವಂತೆ ನೋಡಿಕೊಳ್ಳಬೇಕು ಎಂದು ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

ಸಭೆಯಲ್ಲಿ ಡಿವೈಎಸ್‌ಪಿ ಶಾಂತವೀರ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಸಹಾಯಕ ಆಯುಕ್ತರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.





ಜಿಲ್ಲೆಯ ನೂತನ ಅಪರ ಜಿಲ್ಲಾಧಿಕಾರಿಯಾಗಿ ಸೋಮಲಿಂಗ ಗೋಪಾಲ ಗೆಣ್ಣೂರ ಅಧಿಕಾರ ಸ್ವೀಕಾರ



ರಾಯಚೂರು, ಅ.31 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ನೂತನ ಅಪರ ಜಿಲ್ಲಾಧಿಕಾರಿಯಾಗಿ ಸೋಮಲಿಂಗ ಗೋಪಾಲ ಗೆಣ್ಣೂರ ಅವರು ಅಕ್ಟೋಬರ್ 30ರಂದು ಶುಕ್ರವಾರ ಅಧಿಕಾರ ಸ್ವೀಕರಿಸಿದರು.

ಆಡಳಿತಾತ್ಮಕ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ಹೊರಡಿಸಿರುವ ವರ್ಗಾವಣೆ ಆದೇಶದನ್ವಯ, ಈ ಹಿಂದೆ ರಾಯಚೂರು ಜಿಲ್ಲೆಯ ಅಪರ ಜಿಲ್ಲಾಧಿಕಾರಿಯಾಗಿದ್ದ ಶಿವಪ್ಪ ಯಲ್ಲಪ್ಪ ಭಜಂತ್ರಿ ಅವರನ್ನು ಧಾರವಾಡದ ಕರ್ನಾಟಕ ನೀರಾವರಿ ನಿಗಮದ ಮುಖ್ಯ ಆಡಳಿತಾಧಿಕಾರಿಯಾಗಿ ವರ್ಗಾವಣೆ ಮಾಡಲಾಗಿದೆ. ಅವರ ಸ್ಥಾನಕ್ಕೆ ಸೋಮಲಿಂಗ ಗೋಪಾಲ ಗೆಣ್ಣೂರ ಅವರನ್ನು ನೇಮಕ ಮಾಡಲಾಗಿದ್ದು, ಅವರು ಅಧಿಕಾರ ಸ್ವೀಕರಿಸಿದ್ದಾರೆ.

1999ನೇ ಸಾಲಿನ ಕರ್ನಾಟಕ ಆಡಳಿತ ಸೇವೆ (ಕೆಎಎಸ್) ಬ್ಯಾಚ್‌ನ ಅಧಿಕಾರಿಯಾಗಿರುವ ಸೋಮಲಿಂಗ ಗೋಪಾಲ ಗೆಣ್ಣೂರ ಅವರು ವಿವಿಧ ಜಿಲ್ಲೆಗಳಲ್ಲಿ ಹಲವು ಆಡಳಿತಾತ್ಮಕ ಹುದ್ದೆಗಳನ್ನು ನಿರ್ವಹಿಸಿದ ಅನುಭವ ಹೊಂದಿದ್ದಾರೆ.

ತಮ್ಮ ವೃತ್ತಿಜೀವನದ ಆರಂಭದಲ್ಲಿ ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ತಹಶೀಲ್ದಾರ್ ಆಗಿ ಸೇವೆ ಸಲ್ಲಿಸಿದ ಅವರು, ನಂತರ ಬೆಳಗಾವಿ ಜಿಲ್ಲೆಯ ಸವದತ್ತಿ, ರಾಯಚೂರು ಜಿಲ್ಲೆಯ ಮಾನ್ವಿ ಹಾಗೂ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕುಗಳಲ್ಲಿ ತಹಶೀಲ್ದಾರ್ ಆಗಿ ಕರ್ತವ್ಯ ನಿರ್ವಹಿಸಿದ್ದಾರೆ.

2013ರಲ್ಲಿಆಹಾರಇಲಾಖೆಯಉಪನಿರ್ದೇಶಕರಾಗಿ ಹಾಗೂ 2014ರಲ್ಲಿ ವಿಶೇಷ ಭೂಸ್ವಾಧೀನಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಬಳಿಕ 2019ರಲ್ಲಿ ಚಿಕ್ಕೋಡಿ ಮತ್ತು 2020ರಲ್ಲಿ ವಿಜಯಪುರದಲ್ಲಿ ಸಹಾಯಕ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದಾರೆ.

2021ರಿಂದ 2023ರವರೆಗೆ ಬಾಗಲಕೋಟೆಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯ ವಿಶೇಷ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿದ ಅವರು, 2024ರಲ್ಲಿ ಬೆಳಗಾವಿ ಸ್ಮಾರ್ಟ್ ಸಿಟಿಯ ವ್ಯವಸ್ಥಾಪಕ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದಾರೆ.

ನಂತರ ಕಲಬುರಗಿಯ ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಸಚಿವರಾಗಿ, ವಿಜಯಪುರ ಜಿಲ್ಲೆಯ ಅಪರ ಜಿಲ್ಲಾಧಿಕಾರಿಯಾಗಿ ಹಾಗೂ ಬಾಗಲಕೋಟೆ ವಿಶ್ವವಿದ್ಯಾಲಯದ ಜಮಖಂಡಿಯ ಕುಲಸಚಿವರಾಗಿ ಸೇವೆ ಸಲ್ಲಿಸಿದ್ದಾರೆ.

ಮೂಲತಃ ವಿಜಯಪುರ ಜಿಲ್ಲೆಯ ಬಬಲೇಶ್ವರ ತಾಲೂಕಿನ ದೇವರಗೆಣ್ಣೂರು ಗ್ರಾಮದವರಾದ ಸೋಮಲಿಂಗ ಗೋಪಾಲ ಗೆಣ್ಣೂರ ಅವರು ಕಂದಾಯ, ಆಹಾರ, ಭೂಸ್ವಾಧೀನ, ನಗರಾಭಿವೃದ್ಧಿ ಹಾಗೂ ವಿಶ್ವವಿದ್ಯಾಲಯ ಆಡಳಿತ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಅನುಭವಿ ಅಧಿಕಾರಿಯಾಗಿದ್ದಾರೆ.

ರಾಜ್ಯ ಸರ್ಕಾರದ ಆದೇಶದಂತೆ ಇದೀಗ ರಾಯಚೂರು ಜಿಲ್ಲೆಯ ನೂತನ ಅಪರ ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.



ಶ್ರೀ ಡಿ. ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ
ಮಾನ್ಯ ಉಪಮುಖ್ಯಮಂತ್ರಿಗಳು

ನಾಡಿನ ಸಮಸ್ತ ಜನತೆಗೆ ೭೧ನೇ ಕರ್ನಾಟಕ ರಾಜ್ಯೋತ್ಸವದ ಹಾರ್ದಿಕ ಶುಭಾಶಯಗಳು



ಕನ್ನಡ ರಾಜ್ಯೋತ್ಸವ ಪ್ರಗತಿಯ ನಿತ್ಯೋತ್ಸವ



ಬಾರಿಸು ಕನ್ನಡ ಡಿಂಡಿಮವ ಓ ಕರ್ನಾಟಕ ಹೃದಯ ಶಿವ

ಕನ್ನಡದ ತೇರು ಎಳೆಯುವ ಬನ್ನಿ!

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/ Karnatakavarthe

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಕರ್ನಾಟಕ ವಾರ್ತೆ

ಸಾಯಿಬಾಬಾ ವಿವಿಧೋದ್ದೇಶ ಸೌಹಾರ್ದ ಸಹಕಾರಿ ಸಂಘ ನಿ. ದೇವದುರ್ಗ ತಾ.ದೇವದುರ್ಗ ಜಿ.ರಾಯಚೂರು ಇದರ ಆಡಳಿತ ಮಂಡಳಿ ನಿರ್ದೇಶಕರ ಚುನಾವಣಾ ನೋಟಿಸು

ಸಾಯಿಬಾಬಾ ವಿವಿಧೋದ್ದೇಶ ಸೌಹಾರ್ದ ಸಹಕಾರಿ ಸಂಘ ನಿ. ದೇವದುರ್ಗ ತಾ॥ದೇವದುರ್ಗ ಜಿ॥ರಾಯಚೂರು ಇದರ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆಯನ್ನು ಸೌಹಾರ್ದ ಸಹಕಾರಿ ಸಂಘದಲ್ಲಿ ದಿನಾಂಕ: 17-11-2026ರಂದು ಬೆಳಿಗ್ಗೆ 09-00 ಗಂಟೆಯಿಂದ ಸಾ: 04-00 ಗಂಟೆಯವರೆಗೆ ಈ ಕೆಳಗಿನ ಮೀಸಲಿರಿಸಿದ ಸ್ಥಾನಗಳಿಗೆ ಚುನಾವಣೆ ನಡೆಸಲಾಗುವುದೆಂದು ಮತ್ತು ಸದರಿ ಚುನಾವಣಾ ವೇಳಾಪಟ್ಟಿಯು ಈ ಕೆಳಗಿನಂತೆ ಇರತಕ್ಕದೆಂದೂ ನೋಟಿಸು ನೀಡಲಾಗಿದೆ.

ಚುನಾಯಿಸಬೇಕಾದ ನಿರ್ದೇಶಕರ ಒಟ್ಟು 13 ಸ್ಥಾನಗಳ ಪೈಕಿ

1. ಸಾಮಾನ್ಯ ಸದಸ್ಯರಿಗೆ 07, 2. ಹಿಂದುಳಿದ ವರ್ಗದ ಸದಸ್ಯರಿಗೆ ಒಟ್ಟು-02 ಈ ಪೈಕಿ ಎ ವರ್ಗದ ಸದಸ್ಯರಿಗೆ-1 ಮತ್ತು ಬಿ ವರ್ಗದ ಸದಸ್ಯರಿಗೆ-1, 3. ಪರಿಶಿಷ್ಟ ಜಾತಿ ಸದಸ್ಯರಿಗೆ-01, 4. ಪರಿಶಿಷ್ಟ ಪಂಗಡದ ಸದಸ್ಯರಿಗೆ-01, 5. ಮಹಿಳಾ ಸದಸ್ಯರಿಗೆ-02 ಸ್ಥಾನಗಳನ್ನು ಕಾಯ್ದಿರಿಸಲಾಗಿದೆ.

ಕ್ರಸಂ	ಚುನಾವಣಾ ಕಾರ್ಯಸೂಚಿ	ದಿನಾಂಕ ಮತ್ತು ಸಮಯ	ವಿವರ ಮತ್ತು ಸ್ಥಳ
01	ಆಕಾಂಕ್ಷೆವುಳ್ಳ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಸಲು ಪ್ರಾರಂಭದ ದಿನಾಂಕ (ನಿಯಮ 5ಇ)	ದಿನಾಂಕ:02-11-2026 ರಂದು ಬೆಳಿಗ್ಗೆ 11-00 ರಿಂದ ಮಧ್ಯಾಹ್ನ 3-00 ಘಂಟೆಯವರೆಗೆ.	ಸಂಘದ ಕಚೇರಿಯಲ್ಲಿ ರಿಟರ್ನಿಂಗ್ ಅಧಿಕಾರಿ/ ಅವರಿಂದ ಅಧಿಕಾರ ಪಡೆದವರಿಗೆ
02	ಆಕಾಂಕ್ಷೆವುಳ್ಳ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ (ನಿಯಮ 5ಇ)	ದಿನಾಂಕ:08-11-2026ರಂದು ಬೆಳಿಗ್ಗೆ 11-00 ರಿಂದ ಮಧ್ಯಾಹ್ನ 3-00 ಘಂಟೆಯವರೆಗೆ.	ಸಂಘದ ಕಚೇರಿಯಲ್ಲಿ ರಿಟರ್ನಿಂಗ್ ಅಧಿಕಾರಿ/ ಅವರಿಂದ ಅಧಿಕಾರ ಪಡೆದವರಿಗೆ
03	ನಾಮಪತ್ರಗಳ ಪರಿಶೀಲನೆ (ನಿಯಮ 5ಜಿ)	ದಿನಾಂಕ:09-11-2026 ಬೆಳಿಗ್ಗೆ 11 ಘಂಟೆಯಿಂದ.	ಸಂಘದ ಕಚೇರಿಯಲ್ಲಿ ರಿಟರ್ನಿಂಗ್ ಅಧಿಕಾರಿಯವರಿಂದ
04	ಕ್ರಮಬದ್ಧವಾಗಿ ನಾಮಪತ್ರ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿಯ ಪ್ರಕಟಣೆ (ನಿಯಮ 5ಐ)	ದಿನಾಂಕ:09-11-2026 ನಾಮಪತ್ರಗಳ ಪರಿಶೀಲನೆ ನಂತರ	ಸಂಘದ ಕಚೇರಿಯಲ್ಲಿ ರಿಟರ್ನಿಂಗ್ ಅಧಿಕಾರಿಯವರಿಂದ
05	ಅಭ್ಯರ್ಥಿಗಳಿಂದ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನ (ನಿಯಮ 5ಹೆಚ್)	ದಿನಾಂಕ:10-11-2026 ಮದ್ಯಾಹ್ನ 03-00 ಗಂಟೆಯೊಳಗೆ	ಸಂಘದ ಕಚೇರಿಯಲ್ಲಿ ರಿಟರ್ನಿಂಗ್ ಅಧಿಕಾರಿ/ ಅವರಿಂದ ಅಧಿಕಾರ ಪಡೆದವರಿಗೆ
06	ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳ ಪಟ್ಟಿಯ ಪ್ರಕಟಣೆ (ನಿಯಮ 5ಐ)	ದಿನಾಂಕ:10-11-2026 ಮದ್ಯಾಹ್ನ 03.00ಘಂಟೆಯ ನಂತರ	ಸಂಘದ ಸೂಚನಾ ಫಲಕದಲ್ಲಿ ರಿಟರ್ನಿಂಗ್ ಅಧಿಕಾರಿಯವರಿಂದ
07	ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳಿಗೆ ಚಿಹ್ನೆಗಳ ಹಂಚಿಕೆ (ನಿಯಮ 5ಜೆ)	ದಿನಾಂಕ:11-11-2026	ಸಂಘದ ಸೂಚನಾ ಫಲಕದಲ್ಲಿ ರಿಟರ್ನಿಂಗ್ ಅಧಿಕಾರಿಯವರಿಂದ
08	ಹಂಚಿಕೆಯಾದ ಚಿಹ್ನೆಗಳ ಸಹಿತ ಅಭ್ಯರ್ಥಿಗಳ ಪಟ್ಟಿಯ ಪ್ರಕಟಣೆ (ನಿಯಮ 5ಜೆ)	ದಿನಾಂಕ:11-11-2026	ಸಂಘದ ಸೂಚನಾ ಫಲಕದಲ್ಲಿ ರಿಟರ್ನಿಂಗ್ ಅಧಿಕಾರಿಯವರಿಂದ
09	ಮತದಾನದ ದಿನಾಂಕ ಮತ್ತು ಸಮಯ	ದಿನಾಂಕ:17-11-2026 ಬೆಳಿಗ್ಗೆ 09.00 ರಿಂದ ಮದ್ಯಾಹ್ನ 4.00 ಘಂಟೆಯವರೆಗೆ	ಸಂಘದ ಕಚೇರಿಯ ಸೂಕ್ತ ಸ್ಥಳದಲ್ಲಿ
10	ಮತ ಎಣಿಕೆಯ ದಿನ ಮತ್ತು ದಿನಾಂಕ	ದಿನಾಂಕ:17-11-2026 ಮತದಾನ ಮುಗಿದ ನಂತರ	ಸಂಘದ ಕಚೇರಿಯ ಸೂಕ್ತ ಸ್ಥಳದಲ್ಲಿ
11	ರಿಟರ್ನಿಂಗ್ ಅಧಿಕಾರಿಯಿಂದ ಫಲಿತಾಂಶ ಘೋಷಣೆ	ದಿನಾಂಕ:17-11-2026 ರಂದು ಮತ ಎಣಿಕೆ ಮುಗಿದ ನಂತರ	ಸಂಘದ ಕಚೇರಿಯ ಸೂಕ್ತ ಸ್ಥಳದಲ್ಲಿ

ವಿಶೇಷ ಸೂಚನೆಗಳು:

1. ಸೌಹಾರ್ದ ಸಹಕಾರಿ ಸಂಘದ ಬೈಲಾ ಪ್ರಕಾರ ಒಟ್ಟು 13 ಸ್ಥಾನಗಳು ಇದ್ದು 13 ನಿರ್ದೇಶಕರನ್ನು ಚುನಾಯಿಸಬೇಕಾಗಿರುತ್ತದೆ.
2. ಸೌಹಾರ್ದ ಸಹಕಾರಿ ಸಂಘದ ಬೈಲಾ ಪ್ರಕಾರ ಒಟ್ಟು 13 ಸ್ಥಾನಗಳಲ್ಲಿ, ಸಾಮಾನ್ಯ-07 ಪರಿಶಿಷ್ಟ ಜಾತಿ ಸದಸ್ಯರಿಗೆ-01, ಪರಿಶಿಷ್ಟ ಪಂಗಡದ ಸದಸ್ಯರಿಗೆ-01 ಸ್ಥಾನವನ್ನು, ಹಿಂದುಳಿದ ವರ್ಗದ ಎ ವರ್ಗದ ಸದಸ್ಯರಿಗೆ-01, ಹಿಂದುಳಿದ ವರ್ಗದ ಬಿ ವರ್ಗದ ಸದಸ್ಯರಿಗೆ-01 ಸ್ಥಾನವನ್ನು ಮತ್ತು ಮಹಿಳಾ ಸದಸ್ಯರಿಗೆ-02 ಸ್ಥಾನಗಳನ್ನು ಕಾಯ್ದಿರಿಸಲಾಗಿದೆ.
3. ಸೌಹಾರ್ದ ಸಹಕಾರಿ ಸಂಘದ ಕಾಯ್ದೆ ನಿಯಮ ಮತ್ತು ಬೈಲಾ ಪ್ರಕಾರ ನಿರ್ದೇಶಕ ಮಂಡಳಿಗೆ ಆಯ್ಕೆಯಾಗಬೇಕಾದಲ್ಲಿ ಅಗತ್ಯವಾಗಿ ಇರಬೇಕಾದ ಅರ್ಹತೆಗಳನ್ನು ಹೊಂದಿರತಕ್ಕದ್ದು. (ಆಯಾ ಸೌಹಾರ್ದ ಸಹಕಾರಿಗಳ ಬೈಲಾಗಳಿಗೆ ಅನುಗುಣವಾಗಿ ದಾಖಲಿಸಬೇಕು)
4. ಸೌಹಾರ್ದ ಸಹಕಾರಿ ಕಾಯ್ದೆ, ನಿಯಮ ಮತ್ತು ಬ್ಯಾಂಕಿನ ಬೈಲಾ ಪ್ರಕಾರ ನಿರ್ದೇಶಕ ಮಂಡಳಿಗೆ ಆಯ್ಕೆಯಾಗಬೇಕಾದಲ್ಲಿ ಯಾವುದೇ ಅನರ್ಹತೆಗಳನ್ನು ಹೊಂದಿರತಕ್ಕದ್ದಲ್ಲ.
5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದ ಎ ಮತ್ತು ಬಿ ವರ್ಗದ ಸ್ಥಾನ/ಕ್ಷೇತ್ರಗಳಿಗೆ ಸ್ಪರ್ಧಿಸುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಜಾತಿ ಪ್ರಮಾಣ ಪತ್ರವನ್ನು ನಾಮಪತ್ರದೊಂದಿಗೆ ಕಡ್ಡಾಯವಾಗಿ ಲಗತ್ತಿಸತಕ್ಕದ್ದು.
6. ನಾಮಪತ್ರ ಸಲ್ಲಿಸುವಾಗ ಚುನಾವಣಾ ಠೇವಣಿ ಬಾಬು ರೂ:2000/-ಗಳನ್ನು ನಗದಾಗಿ ಅಥವಾ ಪೇ ಆರ್ಡರ್ ಅಥವಾ ಡಿಮ್ಯಾಂಡ ಡ್ರಾಫ್ಟ್ ಮೂಲಕ ಸಲ್ಲಿಸತಕ್ಕದ್ದು. ಪರಂತು ಪರಿಶಿಷ್ಟ ಜಾತಿ/ಪಂಗಡ, ಹಿಂದುಳಿದ ವರ್ಗದ ಹಾಗೂ ಮಹಿಳಾ ಸದಸ್ಯರಿಗೆ ಶೇ.50 ರಷ್ಟು ವಿನಾಯಿತಿ ಇರುತ್ತದೆ.
7. ನಾಮಪತ್ರಗಳ ಪರಿಶೀಲನೆ ವೇಳೆ ಅಭ್ಯರ್ಥಿಗಳು ಅಥವಾ ಸೂಚಕರು ಹಾಜರಿರಬಹುದು.
8. ನಾಮಪತ್ರಗಳನ್ನು ಕಚೇರಿ ವೇಳೆಯಲ್ಲಿ ಸೌಹಾರ್ದ ಸಹಕಾರಿ ಸಂಘದ ಕಚೇರಿಯಲ್ಲಿ ನಿಗಧಿತ ಶುಲ್ಕ ಪಾವತಿಸಿ ಪಡೆಯಬಹುದು.
9. ನಾಮಪತ್ರಗಳ ವಾಪಸ್ಸಾತಿಗೆ ಅರ್ಜಿಯನ್ನು ನಿಗಧಿತ ನಮೂನೆಯಲ್ಲಿ ಖುದ್ದು ಅಭ್ಯರ್ಥಿಗಳು ನೀಡತಕ್ಕದ್ದು.
10. ಮುಕ್ತ ಚುನಾವಣಾ ಚಿಹ್ನೆಗಳನ್ನು ಸೌಹಾರ್ದ ಸಹಕಾರಿ ಸಂಘದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

ಸ್ಥಳ: ದೇವದುರ್ಗ
ದಿನಾಂಕ: 30-10-2026

ರಿಟರ್ನಿಂಗ್ ಅಧಿಕಾರಿ
ಸಾಯಿಬಾಬಾ ವಿವಿಧೋದ್ದೇಶ ಸೌಹಾರ್ದ ಸಹಕಾರಿ ಸಂಘ ನಿ.
ದೇವದುರ್ಗ ತಾದೇವದುರ್ಗ ಜಿ॥ರಾಯಚೂರು

ಜನವರಿವರೆಗೆ ಕಾಲುವೆಗೆ ನೀರು ಹರಿಸಲು ಆಗ್ರಹ: ನ.16ರಂದು ಬೃಹತ್ ರಸ್ತೆ ತಡೆ ಹೋರಾಟಕ್ಕೆ ಶಾಸಕಿ ಕರೆಮ್ಮ ನಾಯಕ ಕರೆ



ದೇವದುರ್ಗ, ಅ.31: ನಾರಾಯಣಪುರ ಬಲದಂಡೆ ಕಾಲುವೆ ವ್ಯಾಪ್ತಿಯಲ್ಲಿ ನೀರಿನ ಕೊರತೆಯಿಂದ ರೈತರು ಬೆಳೆದಿರುವ ಭತ್ತ ಹಾಗೂ ಮೆಣಸಿನಕಾಯಿ ಬೆಳೆಗಳು ಒಣಗುವ ಆತಂಕ ಎದುರಾಗಿದೆ. ಲಕ್ಷಾಂತರ ರೂಪಾಯಿ ಬಂಡವಾಳ ಹೂಡಿ ಬೆಳೆ ಬೆಳೆದಿರುವ ರೈತರ ಹಿತದೃಷ್ಟಿಯಿಂದ ಜನವರಿ ಅಂತ್ಯದವರೆಗೆ ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಒತ್ತಾಯಿಸಿ ನವೆಂಬರ್ 16ರಂದು ಸಿರವಾರ ಕ್ರಾಸ್ ಬಳಿ ಜೆಡಿಎಸ್ ವತಿಯಿಂದ ಬೃಹತ್ ರೈತ ರ್ಯಾಲಿ ಹಾಗೂ ರಸ್ತೆ ತಡೆ ಚಳವಳಿ ಹಮ್ಮಿಕೊಳ್ಳಲಾಗಿದೆ ಎಂದು ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ ತಿಳಿಸಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ರೈತರ ಬೆಳೆಗಳ ರಕ್ಷಣೆಗೆ ಅಗತ್ಯವಿರುವಷ್ಟು ನೀರು ಒದಗಿಸುವ ಭರವಸೆ ನೀಡಿದ್ದರೂ ನವೆಂಬರ್ 12ರಿಂದ ಕಾಲುವೆಗಳಿಗೆ ನೀರು ಸ್ಥಗಿತಗೊಳಿಸಲು ಮುಂದಾಗಿರುವುದು ರೈತರಲ್ಲಿ ತೀವ್ರ ಆತಂಕ ಮೂಡಿಸಿದೆ. ಬೆಳೆಗಳು ಕಟಾವಿಗೆ ಬರುವ ಮುನ್ನವೇ ನೀರು ನಿಲ್ಲಿಸಿದರೆ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ದೇವದುರ್ಗ ಮತ್ತು ಅರಕೇರಾ ತಾಲೂಕುಗಳ ವ್ಯಾಪ್ತಿಯಲ್ಲಿ ಸುಮಾರು 70 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಹತ್ತಿ, 30 ಸಾವಿರ ಹೆಕ್ಟೇರ್‌ನಲ್ಲಿ ಭತ್ತ ಹಾಗೂ 6 ಸಾವಿರಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಗಳನ್ನು ಬೆಳೆಯಲಾಗಿದೆ. ಹತ್ತಿ ಬೆಳೆ ಈಗಾಗಲೇ ಫಸಲು ನೀಡುವ ಹಂತದಲ್ಲಿದ್ದರೂ ಭತ್ತಕ್ಕೆ ಕನಿಷ್ಠ ಡಿಸೆಂಬರ್ ಅಂತ್ಯದವರೆಗೆ ನೀರಿನ ಅವಶ್ಯಕತೆಯಿದೆ. ಮೆಣಸಿನಕಾಯಿ ಬೆಳೆಗೆ ಜನವರಿವರೆಗೂ ನೀರು ಪೂರೈಕೆಯಾಗಬೇಕಾಗಿದೆ. ಇಂತಹ ಸಂದರ್ಭದಲ್ಲಿ ಕಾಲುವೆ ನೀರು ಸ್ಥಗಿತಗೊಳಿಸುವ ನಿರ್ಧಾರ ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ವಿಶೇಷವಾಗಿ ಮೆಣಸಿನಕಾಯಿ ಬೆಳೆಯಲು ರೈತರು ಪ್ರತಿ ಎಕರೆಗೆ ಸುಮಾರು ₹1 ಲಕ್ಷದವರೆಗೆ ಖರ್ಚು ಮಾಡಿದ್ದಾರೆ. ಕೆಲವರು ಸ್ವಂತ ಜಮೀನಿನ ಜೊತೆಗೆ 10ರಿಂದ 20 ಎಕರೆವರೆಗೆ ಭೂಮಿಯನ್ನು ಗುತ್ತಿಗೆ ಪಡೆದು ಕೃಷಿ ಕೈಗೊಂಡಿದ್ದಾರೆ. ಬೀಜ, ಗೊಬ್ಬರ, ಔಷಧ, ಕೂಲಿ ಹಾಗೂ ಇತರ ಕೃಷಿ ವೆಚ್ಚಗಳಿಗಾಗಿ ಸಾಕಷ್ಟು ಹಣ ಹೂಡಿಕೆ ಮಾಡಿದ್ದಾರೆ. ಡಿಸೆಂಬರ್ ಮತ್ತು ಜನವರಿ ತಿಂಗಳಲ್ಲಿ ಫಸಲು ಕೈ ಸೇರುವ ನಿರೀಕ್ಷೆಯಲ್ಲಿರುವ ರೈತರಿಗೆ ಈಗ ನೀರಿನ ಅಭಾವ ಎದುರಾಗುವ ಸಾಧ್ಯತೆ ಉಂಟಾಗಿದೆ. ಈ ಹಂತದಲ್ಲಿ ಬೆಳೆಗಳು ಹಾನಿಗೊಳಗಾದರೆ ರೈತರಿಗೆ ಕೋಟ್ಯಂತರ ರೂಪಾಯಿ ನಷ್ಟವಾಗುವ ಅಪಾಯವಿದೆ ಎಂದು ವಿವರಿಸಿದರು.

ಈಗಾಗಲೇ ಬರಗಾಲದಿಂದ ಸಂಕಷ್ಟದಲ್ಲಿರುವ ರೈತರು ಸಾಲದ ಹೊರೆ ಹಾಗೂ ಹೆಚ್ಚುತ್ತಿರುವ ಕೃಷಿ ವೆಚ್ಚಗಳಿಂದ ತತ್ತರಿಸಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ನೀರಾವರಿ ಸೌಲಭ್ಯವಿದ್ದರೂ ಬೆಳೆಗಳಿಗೆ ಅಗತ್ಯ ನೀರು ದೊರೆಯದಂತಾದರೆ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗುವ ಪರಿಸ್ಥಿತಿಯನ್ನು ತಪ್ಪಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ಬೆಳೆಗಳ ಬೆಳವಣಿಗೆ ಮತ್ತು ಕಟಾವಿನ ಅವಧಿಯನ್ನು ವೈಜ್ಞಾನಿಕವಾಗಿ ಪರಿಶೀಲಿಸಿ ನೀರು ಬಿಡುಗಡೆಗೆ ಸೂಕ್ತ ವೇಳಾಪಟ್ಟಿ ರೂಪಿಸಬೇಕು ಎಂದು ಆಗ್ರಹಿಸಿದರು.

ರೈತರ ಸಮಸ್ಯೆಗಳನ್ನು ನೇರವಾಗಿ ಆಲಿಸಿ ಹೋರಾಟಕ್ಕೆ ರೂಪುರೇಷೆ ಸಿದ್ಧಪಡಿಸುವ ಉದ್ದೇಶದಿಂದ ನವೆಂಬರ್ 7ರಿಂದ 11ರವರೆಗೆ ದೇವದುರ್ಗ ಮತ್ತು ಅರಕೇರಾ ತಾಲೂಕುಗಳ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ 11 ಸ್ಥಳಗಳಲ್ಲಿ ರೈತರ ಸಭೆಗಳನ್ನು ಆಯೋಜಿಸಲಾಗಿದೆ. ಈ ಸಭೆಗಳಲ್ಲಿ ಬೆಳೆಗಳ ಸ್ಥಿತಿಗತಿ, ನೀರಿನ ಅಗತ್ಯತೆ, ಕೃಷಿ ವೆಚ್ಚ ಹಾಗೂ ಸಂಭವನೀಯ ನಷ್ಟದ ಕುರಿತು ರೈತರಿಂದ ಮಾಹಿತಿ ಸಂಗ್ರಹಿಸಲಾಗುವುದು ಎಂದು ತಿಳಿಸಿದರು.

ಅಲ್ಲದೆ, ನೀರಾವರಿ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಕಾಲುವೆ ವ್ಯಾಪ್ತಿಯ ಬೆಳೆಗಳ ಸಮೀಕ್ಷೆ ನಡೆಸಿ, ನೀರಿನ ಕೊರತೆಯಿಂದ ಉಂಟಾಗಬಹುದಾದ ಹಾನಿಯ ಕುರಿತು ಸಮಗ್ರ ವರದಿ ಸಿದ್ಧಪಡಿಸಲು ಸೂಚಿಸಲಾಗಿದೆ. ವಾರದೊಳಗೆ ಅಧಿಕಾರಿಗಳಿಂದ ವರದಿ ದೊರೆಯುವ ನಿರೀಕ್ಷೆಯಿದ್ದು, ರೈತರಿಂದ ಸಂಗ್ರಹಿಸುವ ಮಾಹಿತಿ ಹಾಗೂ ಇಲಾಖೆಗಳ ವರದಿಯನ್ನು ಆಧರಿಸಿ ಜಿಲ್ಲಾಡಳಿತ ಮತ್ತು ನೀರಾವರಿ ಸಲಹಾ ಸಮಿತಿಯ ಗಮನಕ್ಕೆ ಸಮಸ್ಯೆಯನ್ನು ತರಲಾಗುವುದು. ಮುಂಬರುವ ಚಳಿಗಾಲದ ವಿಧಾನಮಂಡಲ ಅಧಿವೇಶನದಲ್ಲಿಯೂ ಈ ವಿಷಯ ಪ್ರಸ್ತಾಪಿಸಿ ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದು ಹೇಳಿದರು.

ರಾಜ್ಯ ಸರ್ಕಾರದ ಕಾರ್ಯವೈಖರಿಯನ್ನು ಟೀಕಿಸಿದ ಶಾಸಕಿ ಕರೆಮ್ಮ ನಾಯಕ, ಬರಗಾಲ ಘೋಷಣೆ ಮಾಡಿರುವ ಸರ್ಕಾರ ರೈತರಿಗೆ ಸಮರ್ಪಕ ಪರಿಹಾರ ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಡೀಸೆಲ್ ಖರೀದಿಗೂ ಹಣದ ಕೊರತೆಯಿದೆ ಎಂದು ಹೇಳಿರುವುದನ್ನು ಉಲ್ಲೇಖಿಸಿದ ಅವರು, ಸರ್ಕಾರದ ಆರ್ಥಿಕ ನಿರ್ವಹಣೆ ಕುರಿತು ಪ್ರಶ್ನೆ ಎತ್ತಿದರು. ಬರಗಾಲದ ಸಂಕಷ್ಟಕ್ಕೆ ಸ್ಪಂದಿಸಬೇಕಾದ ಸರ್ಕಾರ ರೈತರ ಸಮಸ್ಯೆಗಳನ್ನು ನಿರ್ಲಕ್ಷಿಸುತ್ತಿದೆ ಎಂದು ದೂರಿದರು.

ರೈತರ ಹಿತಾಸಕ್ತಿ ರಕ್ಷಿಸುವ ವಿಷಯದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ. ನವೆಂಬರ್ 12ರಿಂದ ನೀರು ಸ್ಥಗಿತಗೊಳಿಸುವ ನಿರ್ಧಾರವನ್ನು ಮರುಪರಿಶೀಲಿಸಿ ಜನವರಿವರೆಗೆ ನೀರು ಹರಿಸಲು ಸರ್ಕಾರ ಮುಂದಾಗಬೇಕು. ಇಲ್ಲದಿದ್ದರೆ ನವೆಂಬರ್ 16ರಂದು ಸಿರವಾರ ಕ್ರಾಸ್ ಬಳಿ ಸಾವಿರಾರು ರೈತರನ್ನು ಒಗ್ಗೂಡಿಸಿ ಬೃಹತ್ ಪ್ರತಿಭಟನೆ ಹಾಗೂ ರಸ್ತೆ ತಡೆ ನಡೆಸಲಾಗುವುದು. ರೈತರು ಪಕ್ಷಭೇದ ಮರೆತು ಹೋರಾಟದಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ದೇವದುರ್ಗ ತಾಲೂಕು ಜೆಡಿಎಸ್ ಅಧ್ಯಕ್ಷ ಬಸನಗೌಡ ದೇಸಾಯಿ, ಅರಕೇರಾ ತಾಲೂಕು ಅಧ್ಯಕ್ಷ ಸಿದ್ದಣ್ಣ ಬಿ. ಗಣೇಕಲ್, ಮುಖಂಡರಾದ ಶರಣಪ್ಪ ಬಳೆ, ಅಮರೇಶ ಪಾಟೀಲ್ ಪರ್ತಪೂರ, ಹನುಮಂತ್ರಾಯ ನಾಯಕ ಚಿಂತಲಕುಂಟಿ, ಚನ್ನಪ್ಪ ಮಸೀದಪೂರ, ಶಿಖರೇಶ ಪಾಟೀಲ್, ನಾಗರಾಜ ಪಾಟೀಲ್, ಗೋವಿಂದರಾಜ್ ನಾಯಕ, ಶಾಲಂ ಉದ್ದಾರ, ಶಾಂತಕುಮಾರ ಗೋಪಾಳಪೂರ, ಶರಣಗೌಡ, ಚನ್ನಮ್ಮ ವಾಚಾನಾಯ್ಕ ತಾಂಡ ಹಾಗೂ ರಮೇಶ ರಾಮನಾಳ ಉಪಸ್ಥಿತರಿದ್ದರು.

ಬಾಲ್ಯವಿವಾಹ ತಡೆಗೆ ಕಾನೂನು ಅರಿವು ಮತ್ತು ಸಾರ್ವಜನಿಕರ ಸಹಕಾರ ಅಗತ್ಯ



ದೇವದುರ್ಗ: ಬಾಲ್ಯವಿವಾಹವು ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುವುದರಿಂದ ಅದನ್ನು ತಡೆಗಟ್ಟಲು ಕಾನೂನು ಅರಿವು ಮತ್ತು ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ವಕೀಲ ಮಲ್ಲಿಕಾರ್ಜುನ ಪೆನಾಲ್ ತಿಳಿಸಿದರು.

ಬಾಲ್ಯವಿವಾಹ ನಿಷೇಧ ಕಾಯ್ದೆ2006ರ ಕುರಿತು ಶಾಲೆಯಲ್ಲಿ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸಕರಾಗಿ ಮಾತನಾಡಿದ ಅವರು, ಹೆಣ್ಣುಮಕ್ಕಳಿಗೆ 18 ವರ್ಷ ಹಾಗೂ ಗಂಡುಮಕ್ಕಳಿಗೆ 21 ವರ್ಷ ಪೂರ್ಣಗೊಳ್ಳುವ ಮೊದಲು ವಿವಾಹ ನಡೆಸುವುದು ಕಾನೂನುಬಾಹಿರವಾಗಿದೆ ಎಂದು ವಿವರಿಸಿದರು.

ಬಡತನ, ಅನಕ್ಷರತೆ, ಸಾಮಾಜಿಕ ಒತ್ತಡ, ಲಿಂಗ ತಾರತಮ್ಯ ಹಾಗೂ ಮೂಢನಂಬಿಕೆಗಳು ಬಾಲ್ಯವಿವಾಹಕ್ಕೆ ಪ್ರಮುಖ ಕಾರಣಗಳಾಗಿವೆ. ಅಪ್ರಾಪ್ತ ವಯಸ್ಸಿನಲ್ಲಿ ವಿವಾಹವಾಗುವುದರಿಂದ ಮಕ್ಕಳ ಶಿಕ್ಷಣಕ್ಕೆ ಅಡ್ಡಿಯಾಗುವುದಲ್ಲದೆ, ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೂ ದುಷ್ಪರಿಣಾಮ ಉಂಟಾಗುತ್ತದೆ. ಆದ್ದರಿಂದ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಸ್ವಾವಲಂಬಿ ಬದುಕು ರೂಪಿಸಿಕೊಳ್ಳಲು ಅವಕಾಶ ಕಲ್ಪಿಸಬೇಕು ಎಂದರು.

ಬಾಲ್ಯವಿವಾಹ ನಡೆಸುವವರು, ಅದಕ್ಕೆ ಪ್ರೋತ್ಸಾಹ ನೀಡುವವರು ಹಾಗೂ ಸಹಕರಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ. ಕಾಯ್ದೆಯಡಿ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ₹1 ಲಕ್ಷದವರೆಗೆ ದಂಡ ವಿಧಿಸುವ ನಿಬಂಧನೆಗಳಿವೆ. ಬಾಲ್ಯವಿವಾಹದ ಮಾಹಿತಿ ದೊರೆತರೆ ಪೊಲೀಸ್ ಇಲಾಖೆ, ಮಕ್ಕಳ ರಕ್ಷಣಾ ಘಟಕ ಅಥವಾ 1098 ಮಕ್ಕಳ ಸಹಾಯವಾಣಿಗೆ ತಿಳಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮವನ್ನು ವಕೀಲರಾದ ಪವನ ಕುಮಾರ್ ಬೇನಕನ್ ಹಾಗೂ ಪ್ರಭುದೇವ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವಲಯದ ಸಿಆರ್‌ಪಿ ದಾಕ್ಷಾಯಣಿ, ನಂಜುಂಡಯ್ಯ, ವೆಂಕಟಾಂಜನೇಯ, ಎಸ್‌ಡಿಎಂಸಿ ಅಧ್ಯಕ್ಷ ಮುದ್ದು ರಂಗಣ್ಣ, ಬೂದಾನಿ ಸುಗಪ್ಪ ಗೌಡ, ಗ್ರಾಮ ಪಂಚಾಯಿತಿ ಸದಸ್ಯ ಹನುಮಂತರಾಯ, ಬಸವರಾಜ, ದೊರೆಸಾಬ್ ಗೌಡ, ಶಿವಪುತ್ರ ಸೇರಿದಂತೆ ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಜನವಸತಿ ಪ್ರದೇಶದಲ್ಲಿರುವ ಗ್ಯಾಸ್ ಗೋದಾಮು ಸ್ಥಳಾಂತರಕ್ಕೆ ವಿಜಯ ಕರ್ನಾಟಕ ರಕ್ಷಣಾ ವೇದಿಕೆ ಆಗ್ರಹ



ಮಾನ್ವಿ: ಪಟ್ಟಣದ 5ನೇ ವಾರ್ಡ್‌ನ ಜನವಸತಿ ಪ್ರದೇಶದಲ್ಲಿರುವ ಶ್ರೀನಿಧಿ ಭಾರತ್ ಗ್ಯಾಸ್ ಸಂಸ್ಥೆಯ ಅಡುಗೆ ಅನಿಲ ಸಿಲಿಂಡರ್‌ಗಳ ಗೋದಾಮನ್ನು ಪಟ್ಟಣದ ಹೊರವಲಯದ ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಬೇಕು ಎಂದು ವಿಜಯ ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸಿದೆ.

ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲಿ ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಪದಾಧಿಕಾರಿಗಳು ಹಾಗೂ 5ನೇ ವಾರ್ಡ್‌ನ ನಿವಾಸಿಗಳು ಗ್ರೇಡ್-2 ತಹಶೀಲ್ದಾರ್ ಅಬ್ದುಲ್ ವಾಹಿದ್ ಅವರಿಗೆ ಮನವಿ ಸಲ್ಲಿಸಿ, ಗೋದಾಮಿನಿಂದ ಸಂಭವಿಸಬಹುದಾದ ಅಗ್ನಿ ಅವಘಡಗಳ ಕುರಿತು ಆತಂಕ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆಯ ರಾಯಚೂರು ಜಿಲ್ಲಾ ಕಾರ್ಯಾಧ್ಯಕ್ಷ ಆನಂದಸ್ವಾಮಿ ಹಿರೇಮಠ, ಅಡುಗೆ ಅನಿಲ ಸೇರಿದಂತೆ ಸ್ಫೋಟಕ ಸ್ವಭಾವದ ವಸ್ತುಗಳನ್ನು ಜನವಸತಿ ಪ್ರದೇಶಗಳಿಂದ ದೂರವಿರುವ ಸುರಕ್ಷಿತ ಸ್ಥಳಗಳಲ್ಲಿ ಸಂಗ್ರಹಿಸಬೇಕು. ಆದರೆ ಶ್ರೀನಿಧಿ ಭಾರತ್ ಗ್ಯಾಸ್ ಸಂಸ್ಥೆಯು ಪಟ್ಟಣದ 5ನೇ ವಾರ್ಡ್‌ನ ಜನವಸತಿ ಪ್ರದೇಶದ ಮಧ್ಯದಲ್ಲಿಯೇ ಅಡುಗೆ ಅನಿಲ ಸಿಲಿಂಡರ್‌ಗಳನ್ನು ಸಂಗ್ರಹಿಸಲು ಗೋದಾಮು ಹೊಂದಿದೆ ಎಂದು ಆರೋಪಿಸಿದರು.

ಈ ಗೋದಾಮಿನಿಂದ ಪ್ರತಿದಿನ ವಾಹನಗಳ ಮೂಲಕ ನೂರಾರು ಗ್ರಾಹಕರಿಗೆ ಅಡುಗೆ ಅನಿಲ ಸಿಲಿಂಡರ್‌ಗಳನ್ನು ಸರಬರಾಜು ಮಾಡಲಾಗುತ್ತಿದೆ. ಗೋದಾಮಿನಲ್ಲಿ ಹೆಚ್ಚಿನ ಸಂಖ್ಯೆಯ ಸಿಲಿಂಡರ್ ಗಳನ್ನು ಸಂಗ್ರಹಿಸಿರುವುದರಿಂದ ಅನಿಲ ಸೋರಿಕೆ ಅಥವಾ ಆಕಸ್ಮಿಕ ಅಗ್ನಿ ಅವಘಡ ಸಂಭವಿಸಿದಲ್ಲಿ ಸುತ್ತಮುತ್ತಲಿನ ನಿವಾಸಿಗಳಿಗೆ ಅಪಾಯ ಎದುರಾಗುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಗೋದಾಮಿನಲ್ಲಿ ಒಂದು ಸಿಲಿಂಡರ್ ಸ್ಫೋಟಗೊಂಡರೂ ಅದರ ಪರಿಣಾಮ ಇತರ ಸಿಲಿಂಡರ್‌ಗಳಿಗೂ ವ್ಯಾಪಿಸಿ ದೊಡ್ಡ ಪ್ರಮಾಣದ ಅನಾಹುತ ಸಂಭವಿಸುವ ಅಪಾಯವಿದೆ. ಇದರಿಂದ ಸಾರ್ವಜನಿಕರ ಪ್ರಾಣಹಾನಿ ಹಾಗೂ ಆಸ್ತಿಪಾಸ್ತಿಗಳಿಗೆ ಹಾನಿಯಾಗುವ ಸಾಧ್ಯತೆಯನ್ನು ನಿರ್ಲಕ್ಷಿಸಬಾರದು ಎಂದು ಹೇಳಿದರು.

ಗೋದಾಮಿನ ಸುತ್ತಮುತ್ತ ಆಸ್ಪತ್ರೆಗಳು, ಜನವಸತಿ ಪ್ರದೇಶಗಳು, ವಿಶ್ವಚೇತನ ಹಿರಿಯ ಪ್ರಾಥಮಿಕ ಶಾಲೆ, ಬಿ.ವಿ.ಆರ್. ಶಾಲೆ ಹಾಗೂ ಬಿ.ವಿ.ಆರ್. ವಸತಿ ಶಾಲೆ ಸೇರಿದಂತೆ ಹಲವು ಶಿಕ್ಷಣ ಸಂಸ್ಥೆಗಳಿವೆ. ಹೀಗಾಗಿ ವಿದ್ಯಾರ್ಥಿಗಳು, ರೋಗಿಗಳು ಹಾಗೂ ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಗೋದಾಮಿನ ಸ್ಥಳ ಮತ್ತು ಸುರಕ್ಷತಾ ವ್ಯವಸ್ಥೆಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಅಡುಗೆ ಅನಿಲ ಸಿಲಿಂಡರ್‌ಗಳ ಸಂಗ್ರಹಣೆಗೆ ಸಂಬಂಧಿಸಿದ ಸುರಕ್ಷತಾ ನಿಯಮಗಳ ಪಾಲನೆಯಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಿ ಶ್ರೀನಿಧಿ ಭಾರತ್ ಗ್ಯಾಸ್ ಸಂಸ್ಥೆಯ ಗೋದಾಮನ್ನು ಪಟ್ಟಣದ ಹೊರವಲಯದ ಸೂಕ್ತ ಸ್ಥಳಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಜಾ ಸುಭಾಷ್‌ಚಂದ್ರ ನಾಯಕ, ಎಚ್. ಶರಫುದ್ದೀನ್ ಪೋತ್ನಾಳ್, ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಗೌರವಾಧ್ಯಕ್ಷ ಚನ್ನಬಸವಗೌಡ ಗವಿಗಟ್ಟು, ಜಿಲ್ಲಾ ಉಪಾಧ್ಯಕ್ಷ ಶೇಖರಗೌಡ ಮಾಲಿ ಪಾಟೀಲ್, ತಾಲೂಕು ಅಧ್ಯಕ್ಷ ಭೀಮಣ್ಣ ಮುದಗಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚನ್ನಬಸವ ನಾಯಕ ಗೊಲ್ಲದಿನ್ನಿ, ಕೆ. ಶಿವಕುಮಾರ್, ಎಚ್. ಮುಕ್ತಾರ್ ಅನೀಫ್, ಕುರ್ಮಾ, ಶೇಖ್ ಫರೀದ್ ಉಮ್ರಿ, ರಾಜು ತಾಳಿಕೋಟಿ, ತಾಲೂಕು ಪ್ರಧಾನ ಕಾರ್ಯದರ್ಶಿ ಗಿರಿ ನಾಯಕ, ನಾಗರಾಜ ಮೇಟಿ, ಅಫ್ರೋಜ್, ಮನೋಹರ ಆಚಾರಿ, ಸುನಿಲ್ ಬೆಟ್ಟದೂರು, ಲಿಂಗರಾಜ ತಡಕಲ್, ಹುಸೇನಿ, ಹನುಮೇಶ ನಾಯಕ, ಅಮರೇಗೌಡ ಮುಟ್ಟೂರು, ಮರಿಸ್ವಾಮಿ ಶಾಂತಗೇಲ್ ಸೇರಿದಂತೆ 5ನೇ ವಾರ್ಡ್‌ನ ನಿವಾಸಿಗಳು ಉಪಸ್ಥಿತರಿದ್ದರು.

ವ್ಯಕ್ತಿತ್ವ ವಿಕಸನಕ್ಕೆ ನೈತಿಕ ಮೌಲ್ಯಗಳು ಮತ್ತು ನಾಯಕತ್ವದ ಗುಣಗಳು ಅಗತ್ಯ: ಗೋವರ್ಧನ್ ರೆಡ್ಡಿ



ರಾಯಚೂರು, ಅ.31: ವಿದ್ಯಾರ್ಥಿಗಳು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರ ಜೊತೆಗೆ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಹಿರಿಯ ಉಪನ್ಯಾಸಕ ಗೋವರ್ಧನ್ ರೆಡ್ಡಿ ಕರೆ ನೀಡಿದರು.

ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವತಿಯಿಂದ 2026-27ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಅಡಿಯಲ್ಲಿ ಬಹೇರೂನ್‌ಖಿಲ್ಲಾ ಪ್ರದೇಶದಲ್ಲಿ ಆಯೋಜಿಸಿರುವ ವಾರ್ಷಿಕ ವಿಶೇಷ ಶಿಬಿರದ ಅಂಗವಾಗಿ ಶನಿವಾರ ನಡೆದ ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ನೈತಿಕ ಮೌಲ್ಯಗಳು ಕುಸಿಯುತ್ತಿರುವ ಇಂದಿನ ಸಂದರ್ಭದಲ್ಲಿ ವಿದ್ಯಾರ್ಥಿಗಳು ಪ್ರಾಮಾಣಿಕತೆ, ಶಿಸ್ತು, ಸಹಾನುಭೂತಿ, ಪರಸ್ಪರ ಗೌರವ ಹಾಗೂ ಸಾಮಾಜಿಕ ಜವಾಬ್ದಾರಿಯಂತಹ ಉತ್ತಮ ಗುಣಗಳನ್ನು ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ನೈತಿಕ ಮೌಲ್ಯಗಳನ್ನು ಸಂರಕ್ಷಿಸುವುದರ ಜೊತೆಗೆ ಅವುಗಳನ್ನು ದೈನಂದಿನ ಜೀವನದಲ್ಲಿ ಅನುಸರಿಸುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಾಯಕತ್ವವೆಂದರೆ ಕೇವಲ ಇತರರನ್ನು ಮುನ್ನಡೆಸುವುದಲ್ಲ. ಬದಲಾಗಿ ಸಮಾಜದ ಹಿತದೃಷ್ಟಿಯಿಂದ ಜವಾಬ್ದಾರಿಯುತ ನಿರ್ಧಾರಗಳನ್ನು ಕೈಗೊಳ್ಳುವುದು, ಇತರರಿಗೆ ಮಾದರಿಯಾಗುವುದು ಹಾಗೂ ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸುವುದಾಗಿದೆ. ವಿದ್ಯಾರ್ಥಿ ಜೀವನದಲ್ಲಿಯೇ ಇಂತಹ ಗುಣಗಳನ್ನು ರೂಢಿಸಿಕೊಂಡರೆ ಭವಿಷ್ಯದಲ್ಲಿ ಉತ್ತಮ ನಾಗರಿಕರಾಗಿ ರೂಪುಗೊಳ್ಳಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ರವೀಂದ್ರ ಎಸ್. ಬಂಡಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ನೈತಿಕ ಮೌಲ್ಯಗಳ ಮಹತ್ವದ ಕುರಿತು ಅರಿವು ಮೂಡಿಸುವುದು ಇಂದಿನ ಅಗತ್ಯವಾಗಿದೆ. ಯುವಜನರು ದುಶ್ಚಟಗಳಿಂದ ದೂರವಿದ್ದು, ಶಿಸ್ತು, ಸಂಯಮ ಹಾಗೂ ಉತ್ತಮ ನಡವಳಿಕೆಯನ್ನು ಅಳವಡಿಸಿಕೊಂಡು ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳಬೇಕು. ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ಮಹಿಬೂಬ್ ಸಾಬ್ ಮಾತನಾಡಿ, ಉತ್ತಮ ಮೌಲ್ಯಗಳಿಂದಲೇ ಉತ್ತಮ ಜೀವನ ರೂಪಿಸಿಕೊಳ್ಳಲು ಸಾಧ್ಯ. ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ಸಾಮಾಜಿಕ ಕಳಕಳಿ, ಶಿಸ್ತು ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವುದು ರಾಷ್ಟ್ರೀಯ ಸೇವಾ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಶಿಬಿರಾರ್ಥಿಗಳು ಇಲ್ಲಿ ಕಲಿತ ಮೌಲ್ಯಗಳನ್ನು ತಮ್ಮ ಜೀವನದಲ್ಲಿಯೂ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಶಿಬಿರದ ಅಂಗವಾಗಿ ಬೆಳಗಿನ ಅವಧಿಯಲ್ಲಿ ಯೋಗ ಗುರು ವೀರರೆಡ್ಡಿ ಅವರು ಶಿಬಿರಾರ್ಥಿಗಳಿಗೆ ಯೋಗ ತರಬೇತಿ ನೀಡಿದರು. ಕಾರ್ಯಕ್ರಮದಲ್ಲಿ ಹೇಮಂತ್ ರೆಡ್ಡಿ ಹಾಗೂ ಎನ್‌ಎಸ್‌ಎಸ್ ಸ್ವಯಂಸೇವಕರು ಉಪಸ್ಥಿತರಿದ್ದರು.

ಶಿಬಿರಾರ್ಥಿ ಕಾರ್ತಿಕ್ ಪ್ರಾರ್ಥಿಸಿದರು. ಶ್ರೀಕಾಂತ್ ಮತ್ತು ವಿವೇಕ ನೇತೃತ್ವದ ತಂಡ ಎನ್‌ಎಸ್‌ಎಸ್ ಗೀತೆ ಪ್ರಸ್ತುತಪಡಿಸಿತು. ಬಂದೇನವಾಜ್ ವಂದಿಸಿದರು.

ಜಿಲ್ಲೆಯಲ್ಲಿ ವಿಶೇಷ ಕಾರ್ಯಾಚರಣೆ: 1,900ಕ್ಕೂ ಅಧಿಕ ಪ್ರಕರಣಗಳು ದಾಖಲು



ರಾಯಚೂರು, ಅ.31: ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು, ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕುವುದು ಹಾಗೂ ಸಾರ್ವಜನಿಕ ಸುರಕ್ಷತೆ ಬಲಪಡಿಸುವ ಉದ್ದೇಶದಿಂದ ಜಿಲ್ಲಾ ಪೊಲೀಸ್ ಇಲಾಖೆ ಅಕ್ಟೋಬರ್ 27ರಿಂದ 30ರವರೆಗೆ ವಿಶೇಷ ಕಾರ್ಯಾಚರಣೆ ನಡೆಸಿ ವಿವಿಧ ಪ್ರಕರಣಗಳನ್ನು ದಾಖಲಿಸಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ. ಹರೀಶ್ ಹಾಗೂ ಜಿಲ್ಲೆಯ ಹಿರಿಯ ಪೊಲೀಸ್ ಅಧಿಕಾರಿಗಳ ಮಾರ್ಗದರ್ಶನದಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಯಿತು.

ಅಕ್ಟೋಬರ್ 30ರಂದು ಸಂಜೆ 6 ಗಂಟೆಯವರೆಗೆ ನಡೆದ ಕಾರ್ಯಾಚರಣೆಯಲ್ಲಿ ಕಾನೂನು ಉಲ್ಲಂಘನೆ, ಸಂಚಾರ ನಿಯಮಗಳ ಉಲ್ಲಂಘನೆ ಹಾಗೂ ಇತರ ಅಪರಾಧ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಕ್ರಮ ಜರುಗಿಸಲಾಗಿದೆ.

ಕಾರ್ಯಾಚರಣೆಯ ವೇಳೆ 127 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಮೋಟಾರು ವಾಹನ ಕಾಯ್ದೆಯಡಿ ತಪಾಸಣೆ ನಡೆಸಿ 50 ಪ್ರಕರಣಗಳನ್ನು ದಾಖಲಿಸಲಾಗಿದೆ. ಮೋಟಾರು ವಾಹನಗಳ ವಿರುದ್ಧ ಎರಡು ವಿಶೇಷ ಪ್ರಕರಣಗಳನ್ನು ದಾಖಲಿಸಲಾಗಿದೆ.

ಅಬಕಾರಿ ಕಾಯ್ದೆಯಡಿ 12 ಪ್ರಕರಣಗಳನ್ನು ದಾಖಲಿಸಿ ಒಟ್ಟು 102 ಲೀಟರ್ ಅಕ್ರಮ ಮದ್ಯ ವಶಪಡಿಸಿಕೊಳ್ಳಲಾಗಿದೆ. ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ 895 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಪೊಲೀಸ್ ಇಲಾಖೆ ತಿಳಿಸಿದೆ.

ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಿದವರ ವಿರುದ್ಧ 42 ಪ್ರಕರಣಗಳು ದಾಖಲಾಗಿವೆ. ಹೆಲ್ಮೆಟ್ ನಿಯಮ ಉಲ್ಲಂಘನೆಗೆ ಸಂಬಂಧಿಸಿದಂತೆ 194 ಪ್ರಕರಣಗಳು, ಕಲಂ 92ರ ಅಡಿಯಲ್ಲಿ 254 ಪ್ರಕರಣಗಳು ಹಾಗೂ ಕಾರ್ಯಾಚರಣೆ ಸಂದರ್ಭದಲ್ಲಿ ಇತರ 217 ಪ್ರಕರಣಗಳನ್ನು ದಾಖಲಿಸಲಾಗಿದೆ.

ಮುಂಜಾಗ್ರತಾ ಕ್ರಮವಾಗಿ ಆರು ಪ್ರಕರಣಗಳನ್ನು ದಾಖಲಿಸಲಾಗಿದ್ದು, ತಲಾ 56 ಮತ್ತು 161 ಪ್ರಕರಣಗಳು ಇತರ ತಪಾಸಣೆ ವಿಭಾಗಗಳಲ್ಲಿ ದಾಖಲಾಗಿವೆ.

ಇದಲ್ಲದೆ, ಅಕ್ಟೋಬರ್ 30ರಂದು ಸಂಜೆ 5ರಿಂದ ರಾತ್ರಿ 9 ಗಂಟೆಯವರೆಗೆ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಿಶೇಷ ಗಸ್ತು ಕಾರ್ಯಾಚರಣೆ ನಡೆಸಲಾಯಿತು. ಅಪರಾಧ ಚಟುವಟಿಕೆಗಳ ನಿಯಂತ್ರಣ, ಸಾರ್ವಜನಿಕ ಸ್ಥಳಗಳಲ್ಲಿ ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಸಿಬ್ಬಂದಿ ತಪಾಸಣೆ ಕೈಗೊಂಡರು.

ವಿಶೇಷ ಕಾರ್ಯಾಚರಣೆಯಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿದ್ದು, ಸಾರ್ವಜನಿಕ ಸುರಕ್ಷತೆ ದೃಷ್ಟಿಯಿಂದ ಇಂತಹ ತಪಾಸಣೆಗಳನ್ನು ಮುಂದುವರಿಸುವುದಾಗಿ ಜಿಲ್ಲಾ ಪೊಲೀಸ್ ಇಲಾಖೆ ತಿಳಿಸಿದೆ.

ನ.1ರಂದು ರಾಯಚೂರಿನಲ್ಲಿ ರಾಜ್ಯಮಟ್ಟದ ಮಿಸ್ಟರ್ ಕರ್ನಾಟಕ ರತ್ನ2026 ದೇಹದಾರ್ಢ್ಯ ಸ್ಪರ್ಧೆ



ರಾಯಚೂರು: ಕನ್ನಡ ರಾಜ್ಯೋತ್ಸವದ ಅಂಗವಾಗಿ ನವೆಂಬರ್ 1ರಂದು ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ರಾಜ್ಯಮಟ್ಟದ ಮಿಸ್ಟರ್ ಕರ್ನಾಟಕ ರತ್ನ2026 ದೇಹದಾರ್ಢ್ಯ ಸ್ಪರ್ಧೆ ಆಯೋಜಿಸಲಾಗಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ನೂರಾರು ದೇಹದಾರ್ಢ್ಯ ಪಟುಗಳು ಭಾಗವಹಿಸಲಿದ್ದಾರೆ ಎಂದು ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘದ ಪ್ರಧಾನ ಕಾರ್ಯದರ್ಶಿ ಎಲ್. ಸುಧಾಕರ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎನ್.ಎಸ್. ಬೋಸರಾಜು ಫೌಂಡೇಶನ್ ಪ್ರಾಯೋಜಕತ್ವದಲ್ಲಿ ನವೆಂಬರ್ 1ರಂದು ಸಂಜೆ 6 ಗಂಟೆಯಿಂದ ಸ್ಪರ್ಧೆಗಳು ಆರಂಭವಾಗಲಿವೆ. ರಾಜ್ಯದ ವಿವಿಧ ಭಾಗಗಳಿಂದ ಸುಮಾರು 200ರಿಂದ 300 ಸ್ಪರ್ಧಿಗಳು ಪಾಲ್ಗೊಳ್ಳುವ ನಿರೀಕ್ಷೆಯಿದ್ದು, ತಮ್ಮ ದೈಹಿಕ ಸಾಮರ್ಥ್ಯ, ಕಠಿಣ ಪರಿಶ್ರಮ ಹಾಗೂ ದೇಹದಾರ್ಢ್ಯ ಕೌಶಲ್ಯವನ್ನು ಪ್ರದರ್ಶಿಸಲು ಈ ವೇದಿಕೆ ಅವಕಾಶ ಕಲ್ಪಿಸಲಿದೆ ಎಂದರು.

ದೇಹದಾರ್ಢ್ಯ ಕ್ರೀಡೆಯ ಬಗ್ಗೆ ಯುವಜನರಲ್ಲಿ ಆಸಕ್ತಿ ಬೆಳೆಸುವುದು, ಪ್ರತಿಭಾವಂತ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವುದು ಹಾಗೂ ಜಿಲ್ಲೆಯಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಉತ್ತೇಜನ ನೀಡುವುದು ಸ್ಪರ್ಧೆಯ ಪ್ರಮುಖ ಉದ್ದೇಶವಾಗಿದೆ. ರಾಜ್ಯಮಟ್ಟದ ಸ್ಪರ್ಧೆ ರಾಯಚೂರಿನಲ್ಲಿ ನಡೆಯುತ್ತಿರುವುದು ಸ್ಥಳೀಯ ಕ್ರೀಡಾಪಟುಗಳಿಗೆ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು ಉತ್ತಮ ಅವಕಾಶವಾಗಲಿದೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡುವ ವಿಜೇತರಿಗೆ ಆಕರ್ಷಕ ನಗದು ಬಹುಮಾನಗಳನ್ನು ನಿಗದಿಪಡಿಸಲಾಗಿದೆ. ಪ್ರಥಮ ಸ್ಥಾನ ಗಳಿಸುವ ಸ್ಪರ್ಧಿಗೆ ₹55,555, ದ್ವಿತೀಯ ಸ್ಥಾನಕ್ಕೆ ₹22,222 ಹಾಗೂ ತೃತೀಯ ಸ್ಥಾನಕ್ಕೆ ₹11,111 ನಗದು ಪುರಸ್ಕಾರ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ರವಿ ಬೋಸರಾಜು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರಂ ಸಿಂಗ್ ಗೌರವ ಅತಿಥಿಯಾಗಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಆರ್.ವಿ. ಫಿಟ್ನೆಸ್ ಕ್ಲಬ್, ಪವರ್ ಫಿಟ್ನೆಸ್ ಸಂಘಟನೆ, ಕರ್ನಾಟಕ ಅಸೋಸಿಯೇಷನ್ ಆಫ್ ಬಾಡಿ ಬಿಲ್ಡರ್ಸ್ ಹಾಗೂ ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘದ ಸಹಯೋಗದಲ್ಲಿ ಸ್ಪರ್ಧೆ ಆಯೋಜಿಸಲಾಗಿದೆ. ಕ್ರೀಡಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ಪರ್ಧಿಗಳನ್ನು ಪ್ರೋತ್ಸಾಹಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರಿಷಬ್ ವೈಶಿಷ್ಟ, ವಿಶ್ವನಾಥ್, ಹರ್ಷ ಹಾಗೂ ಆಕಾಶ್ ಉಪಸ್ಥಿತರಿದ್ದರು.

ಭೋವಿ ಅಭಿವೃದ್ಧಿ ನಿಗಮದ ಭೂ ಖರೀದಿ ಯೋಜನೆಯಲ್ಲಿ ₹24 ಕೋಟಿ ಅವ್ಯವಹಾರ ಆರೋಪ: ಸಿಬಿಐ ತನಿಖೆಗೆ ಆಗ್ರಹ



ರಾಯಚೂರು, ಅ.31: ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಭೂ ಖರೀದಿ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಸುಮಾರು ₹24 ಕೋಟಿ ಮೊತ್ತದ ಅವ್ಯವಹಾರ ನಡೆದಿದೆ ಎಂದು ಕರ್ನಾಟಕ ರಾಜ್ಯ ರೈತ ರಕ್ಷಕ ಸೇನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಚಂದ್ರಶೇಖರ್ ಬಿ.ಟಿ. ಗಂಭೀರ ಆರೋಪ ಮಾಡಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರು, ಮಾನ್ವಿ, ಸಿರವಾರ ಹಾಗೂ ಸಿಂಧನೂರು ತಾಲೂಕುಗಳಲ್ಲಿ ಭೂ ಖರೀದಿ ಯೋಜನೆಯ ಹೆಸರಿನಲ್ಲಿ ಅರ್ಹ ಫಲಾನುಭವಿಗಳಿಗೆ ವಂಚನೆ ಮಾಡಲಾಗಿದೆ. ಫಲವತ್ತಾದ ಕೃಷಿ ಭೂಮಿ ನೀಡುವುದಾಗಿ ನಂಬಿಸಿ, ಕೃಷಿಗೆ ಯೋಗ್ಯವಲ್ಲದ ಸವಳು ಹಾಗೂ ಜಾಲಿ ಗಿಡಗಳು ಬೆಳೆದಿರುವ ಜಮೀನುಗಳನ್ನು ಮಂಜೂರು ಮಾಡಲಾಗಿದೆ ಎಂದು ದೂರಿದರು.

202324ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯಿಂದ ಸುಮಾರು 42 ಎಕರೆ ಭೂಮಿಗೆ ಅನುಮೋದನೆ ದೊರೆತಿತ್ತು. ಆದರೆ ನಂತರದ ವರ್ಷಗಳಲ್ಲಿ ಸಮಿತಿಯ ಅನುಮೋದನೆ ಪಡೆಯದೆಯೇ ಭೂ ಖರೀದಿ ಪ್ರಕ್ರಿಯೆ ನಡೆಸಲಾಗಿದೆ. ಸಂಬಂಧಪಟ್ಟ ಕಂದಾಯ ಮತ್ತು ನೀರಾವರಿ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸದೆ ದಾಖಲೆಗಳನ್ನು ಸಿದ್ಧಪಡಿಸಿದ್ದಾರೆ ಎಂದು ಆರೋಪಿಸಿದರು.

ಯೋಜನೆಯಡಿ ಸುಮಾರು 48 ಫಲಾನುಭವಿಗಳಿಂದ ತಲಾ ₹80 ಸಾವಿರದವರೆಗೆ ಹಣ ವಸೂಲಿ ಮಾಡಲಾಗಿದೆ. ವಾಸ್ತವದಲ್ಲಿ ₹4.50 ಲಕ್ಷ ಮೌಲ್ಯದ ಜಮೀನನ್ನು ನೋಂದಣಿ ದಾಖಲೆಗಳಲ್ಲಿ ₹12.50 ಲಕ್ಷ ಎಂದು ತೋರಿಸಿ ಹಣ ದುರುಪಯೋಗಪಡಿಸಿಕೊಳ್ಳಲಾಗಿದೆ. ಫಲಾನುಭವಿಗಳ ಹೆಸರಿನಲ್ಲಿ ಸಾಲ ಮಂಜೂರು ಮಾಡಿಸಿ, ಹಣದ ಒಂದು ಭಾಗವನ್ನು ಮಧ್ಯವರ್ತಿಗಳು ಪಡೆದುಕೊಂಡಿದ್ದಾರೆ ಎಂದು ಆರೋಪಿಸಿದರು.

ಸುಮಾರು 240ರಿಂದ 250 ಎಕರೆ ಭೂಮಿಯ ಖರೀದಿ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ. ಕೆಲವು ಫಲಾನುಭವಿಗಳ ಹೆಸರಿಗೆ ಜಮೀನು ನೋಂದಣಿಯಾಗಿದ್ದರೂ ಅವರಿಗೆ ವಾಸ್ತವಿಕವಾಗಿ ಜಮೀನು ಹಸ್ತಾಂತರವಾಗಿಲ್ಲ. ಭೂಮಿಗೆ ಸಂಬಂಧಿಸಿದ ದಾಖಲೆಗಳು, ಸಹಿಗಳು ಹಾಗೂ ಸಮಿತಿಯ ಕಡತಗಳನ್ನು ನಕಲಿ ಮಾಡಲಾಗಿದೆ ಎಂದು ದೂರಿದರು.

ನಿಗಮದ ಅಧಿಕಾರಿಗಳು ಹಾಗೂ ಮಧ್ಯವರ್ತಿಗಳ ಪಾತ್ರದ ಕುರಿತು ಸಮಗ್ರ ತನಿಖೆ ನಡೆಸಬೇಕು. ಪ್ರಕರಣಕ್ಕೆ ಸಂಬಂಧಿಸಿದಂತೆ ರವಿಕುಮಾರ್ ಸೇರಿದಂತೆ ಆರೋಪ ಎದುರಿಸುತ್ತಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ನಿಗಮದ ಅಧ್ಯಕ್ಷ ಎಂ. ರಾಮಪ್ಪ ಅವರನ್ನು ಸ್ಥಾನದಿಂದ ಕೆಳಗಿಳಿಸಿ, ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಒತ್ತಾಯಿಸಿದರು.

ವಂಚನೆಗೊಳಗಾದ ಫಲಾನುಭವಿಗಳಿಗೆ ನೀರಾವರಿ, ವಿದ್ಯುತ್ ಹಾಗೂ ರಸ್ತೆ ಸೌಲಭ್ಯವಿರುವ ಕೃಷಿಯೋಗ್ಯ ಜಮೀನು ಒದಗಿಸಬೇಕು. ಇಲ್ಲದಿದ್ದರೆ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಲತಾ, ಮಧು ಚಂದ್ರಶೇಖ್ರ,ಲಕ್ಷ್ಮಿ ವೀರೇಶ್, ನಾಗಮ್ಮ ರೆಡ್ಡಪ್ಪ, ಗಂಗಮ್ಮ ರಮೇಶ್, ಶಂಕ್ರಮ್ಮ ಸೇರಿದಂತೆ ಹಲವು ಫಲಾನುಭವಿಗಳು ಉಪಸ್ಥಿತರಿದ್ದರು.

ಹಾಲಿನ ಬೆಲೆ ಹೆಚ್ಚಳ, ಬಸ್ ಪ್ರಯಾಣ ದರ ಏರಿಕೆ ಪ್ರಸ್ತಾವನೆಗೆ ಎಸ್‌ಯುಸಿಐ ಆಕ್ರೋಶ



ರಾಯಚೂರು, ಅ.31: ಬರಗಾಲ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ ಹಾಲಿನ ದರ ಹೆಚ್ಚಳ ಮತ್ತು ಬಸ್ ಪ್ರಯಾಣ ದರ ಏರಿಕೆ ಪ್ರಸ್ತಾವನೆ ಜನರ ಮೇಲೆ ಮತ್ತಷ್ಟು ಹೊರೆ ಹೊರಿಸಲಿದೆ ಎಂದು ಆರೋಪಿಸಿ ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷದ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ರಾಜ್ಯ ಸರ್ಕಾರ ಪ್ರತಿ ಲೀಟರ್ ಹಾಲಿನ ಬೆಲೆಯನ್ನು ₹8 ಹೆಚ್ಚಿಸಿರುವುದನ್ನು ಖಂಡಿಸಿದ ಪ್ರತಿಭಟನಾಕಾರರು, ಜನರ ಜೀವನ ನಿರ್ವಹಣೆಯ ವೆಚ್ಚ ದಿನದಿಂದ ದಿನಕ್ಕೆ ಹೆಚ್ಚುತ್ತಿರುವಾಗ ಸರ್ಕಾರ ಬೆಲೆ ಏರಿಕೆಗೆ ಕಡಿವಾಣ ಹಾಕುವ ಬದಲು ಮತ್ತಷ್ಟು ಆರ್ಥಿಕ ಹೊರೆ ವಿಧಿಸುತ್ತಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹೈನುಗಾರರು ಎದುರಿಸುತ್ತಿರುವ ಸಮಸ್ಯೆಗಳಿಗೆ ಗ್ರಾಹಕರ ಮೇಲೆ ಬೆಲೆ ಏರಿಕೆಯ ಹೊರೆ ಹಾಕುವುದು ಶಾಶ್ವತ ಪರಿಹಾರವಲ್ಲ. ಹಾಲು ಉತ್ಪಾದಕರಿಗೆ ಅನುಕೂಲವಾಗುವಂತೆ ಜಾನುವಾರುಗಳ ಮೇವು ಹಾಗೂ ಪಶು ಆಹಾರವನ್ನು ಸಬ್ಸಿಡಿ ದರದಲ್ಲಿ ಒದಗಿಸಬೇಕು. ಕರ್ನಾಟಕ ಹಾಲು ಮಹಾಮಂಡಳದಲ್ಲಿನ ಅನಗತ್ಯ ವೆಚ್ಚಗಳನ್ನು ನಿಯಂತ್ರಿಸಿ, ಉತ್ಪಾದನಾ ವೆಚ್ಚ ತಗ್ಗಿಸಲು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಹಾಲು ಮಕ್ಕಳಿಂದ ಹಿಡಿದು ವೃದ್ಧರವರೆಗೆ ಎಲ್ಲರಿಗೂ ಅಗತ್ಯವಾಗಿರುವ ಪೌಷ್ಟಿಕ ಆಹಾರವಾಗಿದೆ. ಅದರ ಬೆಲೆ ಹೆಚ್ಚಳದಿಂದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಮಾಸಿಕ ಖರ್ಚು ಮತ್ತಷ್ಟು ಹೆಚ್ಚಾಗಲಿದೆ. ಆದ್ದರಿಂದ ಸರ್ಕಾರ ಹಾಲಿನ ದರ ಹೆಚ್ಚಳದ ನಿರ್ಧಾರವನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ ಸಾರಿಗೆ ನಿಗಮಗಳು ಗ್ರಾಮೀಣ ಪ್ರದೇಶಗಳಲ್ಲಿ ಶೇ.28 ಹಾಗೂ ಬೆಂಗಳೂರು ನಗರದಲ್ಲಿ ಶೇ.45ರಷ್ಟು ಬಸ್ ಪ್ರಯಾಣ ದರ ಹೆಚ್ಚಳಕ್ಕೆ ಪ್ರಸ್ತಾವನೆ ಸಲ್ಲಿಸಿರುವುದಕ್ಕೂ ತೀವ್ರ ವಿರೋಧ ವ್ಯಕ್ತಪಡಿಸಿದರು. ಸಾರ್ವಜನಿಕ ಸಾರಿಗೆಯನ್ನು ಅವಲಂಬಿಸಿರುವ ಕೂಲಿ ಕಾರ್ಮಿಕರು, ರೈತರು, ವಿದ್ಯಾರ್ಥಿಗಳು ಹಾಗೂ ಕಡಿಮೆ ಆದಾಯದ ಕುಟುಂಬಗಳಿಗೆ ದರ ಏರಿಕೆಯಿಂದ ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಬರಗಾಲದ ಪರಿಣಾಮ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಾವಕಾಶಗಳು ಕಡಿಮೆಯಾಗಿದ್ದು, ಕೃಷಿ ಕೂಲಿಕಾರರು ಕೆಲಸವಿಲ್ಲದೆ ಪರದಾಡುತ್ತಿದ್ದಾರೆ. ಮತ್ತೊಂದೆಡೆ ಕಾರ್ಮಿಕರ ವೇತನದಲ್ಲಿ ನಿರೀಕ್ಷಿತ ಹೆಚ್ಚಳವಾಗದಿದ್ದರೂ ಅಕ್ಕಿ, ಬೇಳೆ ಸೇರಿದಂತೆ ದಿನಬಳಕೆಯ ವಸ್ತುಗಳ ಬೆಲೆ ನಿರಂತರವಾಗಿ ಏರುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಹಾಲು ಮತ್ತು ಸಾರಿಗೆ ದರ ಹೆಚ್ಚಿಸುವ ಕ್ರಮ ಜನಸಾಮಾನ್ಯರ ಬದುಕನ್ನು ಮತ್ತಷ್ಟು ಸಂಕಷ್ಟಕ್ಕೆ ತಳ್ಳಲಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಸರ್ಕಾರ ಜನರ ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸಿ ಹಾಲಿನ ದರ ಹೆಚ್ಚಳವನ್ನು ಹಿಂಪಡೆಯುವುದರ ಜೊತೆಗೆ ಬಸ್ ಪ್ರಯಾಣ ದರ ಏರಿಕೆ ಪ್ರಸ್ತಾವನೆಯನ್ನು ತಿರಸ್ಕರಿಸಬೇಕು. ಬೆಲೆ ಏರಿಕೆ ವಿರುದ್ಧ ಸಾರ್ವಜನಿಕರು ಸಂಘಟಿತ ಹೋರಾಟಕ್ಕೆ ಮುಂದಾಗಬೇಕು ಎಂದು ಎಸ್‌ಯುಸಿಐ (ಸಿ) ಮುಖಂಡರು ಕರೆ ನೀಡಿದರು.

ಪ್ರತಿಭಟನೆಯಲ್ಲಿ ಪಕ್ಷದ ಜಿಲ್ಲಾ ಸಮಿತಿ ಸದಸ್ಯರಾದ ಚನ್ನಬಸವ ಜಾನೇಕಲ್, ಮಹೇಶ್ ಚೀಕಲಪರ್ವಿ, ಅಣ್ಣಪ್ಪ, ಹಿರಿಯ ನಾಗರಿಕರಾದ ವೀರೇಶ್ ಬಾಬು, ಮಹೇಂದ್ರ ಸಿಂಗ್, ಶಾಂತನಗೌಡ, ವೀರಪ್ಪ ಪಾಟೀಲ್ ಹಾಗೂ ಸಂಘಟನೆಯ ಸದಸ್ಯರಾದ ಪ್ರಮೋದ್, ಅಂಬಾಜಿ, ವಿನೋದ್, ಅಮೋಘ, ರೆಹಾನುದ್ದಿನ್, ಗೌಸ್, ಶಿವು ಸೇರಿದಂತೆ ಹಲವರು ಭಾಗವಹಿಸಿದ್ದರು.

ಮಕ್ಕಳ ಮೇಲಿನ ಶೋಷಣೆ ತಡೆಗೆ ಶಿಕ್ಷಕರು, ಸಿಬ್ಬಂದಿ ಜಾಗೃತರಾಗಬೇಕು: ಕಂಚಿ ಮಾಯಣ್ಣ ಗೌತಮ್



ಮಾನ್ವಿ: ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಶೋಷಣೆಯಂತಹ ಪ್ರಕರಣಗಳು ಸಂಭವಿಸಿದ ನಂತರ ಕ್ರಮ ಕೈಗೊಳ್ಳುವುದಕ್ಕಿಂತ, ಅವುಗಳನ್ನು ಮುಂಚಿತವಾಗಿಯೇ ಗುರುತಿಸಿ ತಡೆಗಟ್ಟುವುದು ಅತ್ಯಂತ ಮುಖ್ಯವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಕಂಚಿ ಮಾಯಣ್ಣ ಗೌತಮ್ ಹೇಳಿದರು.

ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ಸಭಾಂಗಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆಡಳಿತದ ಸಂಯುಕ್ತಾಶ್ರಯದಲ್ಲಿ ಸುರಕ್ಷಿತ್ ಬಚ್‌ಪನ್ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಲೆ ಮತ್ತು ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕರು ಹಾಗೂ ಸಿಬ್ಬಂದಿ ಮಕ್ಕಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮಕ್ಕಳ ನಡವಳಿಕೆಯಲ್ಲಿ ಕಂಡುಬರುವ ಅಸಹಜ ಬದಲಾವಣೆಗಳು, ದೇಹದ ಮೇಲಿನ ಗಾಯಗಳು, ಭಯ, ಆತಂಕ ಹಾಗೂ ಅವರ ಪ್ರತಿಕ್ರಿಯೆಗಳನ್ನು ಸೂಕ್ಷ್ಮವಾಗಿ ಗಮನಿಸಬೇಕು. ಇಂತಹ ಲಕ್ಷಣಗಳು ಕಂಡುಬಂದಾಗ ಅವುಗಳ ಹಿಂದಿನ ಕಾರಣಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ, ಶೋಷಣೆಯ ಅನುಮಾನವಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಇದರಿಂದ ಸಂಭವನೀಯ ಅನಾಹುತಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.


ಅಂತರ್ಜಾಲ ಬಳಕೆಯಲ್ಲಿಯೂ ಮಕ್ಕಳು ಎಚ್ಚರಿಕೆ ವಹಿಸಬೇಕು. ಮಕ್ಕಳ ಲೈಂಗಿಕ ಶೋಷಣೆಗೆ ಸಂಬಂಧಿಸಿದ ಅಕ್ರಮ ವಿಷಯಗಳನ್ನು ಹುಡುಕುವುದು, ಸಂಗ್ರಹಿಸುವುದು ಅಥವಾ ಹಂಚಿಕೊಳ್ಳುವುದು ಕಾನೂನುಬದ್ಧ ಪರಿಣಾಮಗಳಿಗೆ ಕಾರಣವಾಗಬಹುದು. ಡಿಜಿಟಲ್ ಮಾಧ್ಯಮಗಳ ಬಳಕೆಯಲ್ಲಿ ಸುರಕ್ಷತೆ ಮತ್ತು ಕಾನೂನು ಅರಿವು ಅತ್ಯಗತ್ಯವಾಗಿದೆ. ಯಾವುದೇ ರೀತಿಯ ಶೋಷಣೆ ಅಥವಾ ಅನ್ಯಾಯಕ್ಕೆ ಒಳಗಾದ ಮಕ್ಕಳು ತಾಲೂಕು ಕಾನೂನು ಸೇವಾ ಸಮಿತಿಯ ಮೂಲಕ ಉಚಿತ ಕಾನೂನು ನೆರವು ಪಡೆಯಬಹುದು ಎಂದು ವಿವರಿಸಿದರು.

ಕಿರಿಯ ಸಿವಿಲ್ ನ್ಯಾಯಾಧೀಶ ಆನಂದ ಎಚ್. ಕೊಣ್ಣೂರು ಮಾತನಾಡಿ, ಮಕ್ಕಳನ್ನು ಲೈಂಗಿಕ ದೌರ್ಜನ್ಯ ಮತ್ತು ಶೋಷಣೆಯಿಂದ ರಕ್ಷಿಸುವ ಉದ್ದೇಶದಿಂದ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೋ) ಕಾಯ್ದೆಯನ್ನು ಜಾರಿಗೊಳಿಸಲಾಗಿದೆ. ಈ ಕಾಯ್ದೆಯಡಿ ಗಂಡು ಮತ್ತು ಹೆಣ್ಣು ಮಕ್ಕಳಿಬ್ಬರಿಗೂ ಕಾನೂನು ರಕ್ಷಣೆ ದೊರೆಯುತ್ತದೆ. ಶೋಷಣೆಗೆ ಒಳಗಾದ ಮಕ್ಕಳ ಗೌಪ್ಯತೆ, ಸುರಕ್ಷತೆ ಹಾಗೂ ಮಾನಸಿಕ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಮಕ್ಕಳ ಸ್ನೇಹಿ ವಿಧಾನದಲ್ಲಿ ವಿಚಾರಣೆ ನಡೆಸಲು ಕಾನೂನಿನಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಮೊಬೈಲ್ ಬಳಕೆಯ ಗೀಳಿಗೆ ಒಳಗಾಗದೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ತಂತ್ರಜ್ಞಾನವನ್ನು ಜ್ಞಾನಾರ್ಜನೆಗೆ ಪೂರಕವಾಗಿ ಬಳಸಿಕೊಳ್ಳಬೇಕು. ಉತ್ತಮ ಶಿಕ್ಷಣ, ಶಿಸ್ತು ಹಾಗೂ ಕಾನೂನು ಅರಿವಿನ ಮೂಲಕ ಸುರಕ್ಷಿತ ಮತ್ತು ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಾನ್ವಿ ಪೊಲೀಸ್ ಠಾಣೆಯ ಎಎಸ್‌ಐ ಹನುಮೇಶ ಬೊಮ್ಮನಾಳ್, ತಾಲೂಕು ನ್ಯಾಯವಾದಿಗಳ ಸಂಘದ ಅಧ್ಯಕ್ಷ ರವಿಕುಮಾರ ಪಾಟೀಲ್, ವಕೀಲರಾದ ಯಲ್ಲಪ್ಪ ಹಿರೇಬಾದರದಿನ್ನಿ, ಶಿವಪ್ಪನಾಯಕ, ದತ್ತಾತ್ರೇಯ ಹಿರೇಕೊಟ್ನೆಕಲ್, ಶ್ರೀನಿವಾಸ ನಂದಿಹಾಳ್, ಶಶಿಕಾಂತಯ್ಯ, ಚನ್ನಬಸವನಾಯಕ, ಶಕೀಲಬಾದಯಿ, ಶ್ರೀದೇವಿ ಬಳಿಗಾರ, ನಿರ್ಮಲಾ, ಸಮಾಜ ಕಲ್ಯಾಣ ಇಲಾಖೆಯ ಕಚೇರಿ ಅಧೀಕ್ಷಕ ವಿಜಯ ಎಸ್. ಕೆ., ನಿಲಯ ಪಾಲಕಿ ಮಂಜುಳಾ, ತಾಲೂಕು ಶಿಕ್ಷಣ ಸಂಯೋಜಕಿ ರಾಚಮ್ಮ, ಸಿಆರ್‌ಪಿ ಸೋಮಶೇಖರ, ಬಿಆರ್‌ಪಿ ಸಿದ್ದಲಿಂಗೇಶ್ವರ ಸೇರಿದಂತೆ ವಸತಿ ನಿಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇಂದಿರಾ ಗಾಂಧಿ ಪುಣ್ಯಸ್ಮರಣೆ, ಸರ್ದಾರ್ ಪಟೇಲ್ ಜಯಂತಿ ಆಚರಣೆ



ರಾಯಚೂರು, ಅ.31: ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಪುಣ್ಯತಿಥಿ ಹಾಗೂ ಭಾರತದ ಮೊದಲ ಉಪಪ್ರಧಾನಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಅಂಗವಾಗಿ ಶನಿವಾರ ನಗರದ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಸ್ಮರಣಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಆರಂಭದಲ್ಲಿ ಉಭಯ ನಾಯಕರ ಭಾವಚಿತ್ರಗಳಿಗೆ ಪುಷ್ಪಮಾಲೆ ಅರ್ಪಿಸಿ ಗೌರವ ನಮನ ಸಲ್ಲಿಸಲಾಯಿತು. ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿ ದೇಶದ ನಿರ್ಮಾಣದಲ್ಲಿ ಇಬ್ಬರು ನಾಯಕರ ಕೊಡುಗೆಗಳನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಾನಗರ ಪಾಲಿಕೆಯ ಮಾಜಿ ಹಿರಿಯ ಸದಸ್ಯ ಜಯಣ್ಣ, ದೇಶದ ಮೊದಲ ಮಹಿಳಾ ಪ್ರಧಾನಮಂತ್ರಿಯಾಗಿ ಇಂದಿರಾ ಗಾಂಧಿ ಅವರು ತಮ್ಮ ದಿಟ್ಟ ಆಡಳಿತ, ದೂರದೃಷ್ಟಿಯ ನಿರ್ಧಾರಗಳು ಹಾಗೂ ಜನಪರ ಕಾರ್ಯಕ್ರಮಗಳ ಮೂಲಕ ರಾಷ್ಟ್ರದ ಪ್ರಗತಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಸವಾಲಿನ ಸಂದರ್ಭಗಳಲ್ಲಿಯೂ ದೃಢ ನಾಯಕತ್ವ ಪ್ರದರ್ಶಿಸಿದ ಅವರು ಭಾರತೀಯ ರಾಜಕೀಯದಲ್ಲಿ ಅಚ್ಚಳಿಯದ ಛಾಪು ಮೂಡಿಸಿದ್ದಾರೆ ಎಂದು ಹೇಳಿದರು.

ಸ್ವಾತಂತ್ರ್ಯಾನಂತರ ವಿವಿಧ ಸಂಸ್ಥಾನಗಳನ್ನು ಭಾರತ ಒಕ್ಕೂಟದಲ್ಲಿ ವಿಲೀನಗೊಳಿಸುವ ಮೂಲಕ ರಾಷ್ಟ್ರದ ಏಕೀಕರಣಕ್ಕೆ ಸರ್ದಾರ್ ವಲ್ಲಭಭಾಯಿ ಪಟೇಲ್ ಪ್ರಮುಖ ಪಾತ್ರ ವಹಿಸಿದ್ದರು. ಅವರ ಸಂಘಟನಾ ಸಾಮರ್ಥ್ಯ, ರಾಷ್ಟ್ರನಿಷ್ಠೆ ಹಾಗೂ ಆಡಳಿತದ ದೃಢತೆ ಇಂದಿನ ಪೀಳಿಗೆಗೆ ಮಾರ್ಗದರ್ಶಕವಾಗಿವೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಕಾಂಗ್ರೆಸ್ ಸಮಿತಿಯ ಕೋಶಾಧ್ಯಕ್ಷ ಜಯವಂತರಾವ್ ಪತಂಗೆ ಮಾತನಾಡಿ, ಇಂದಿರಾ ಗಾಂಧಿ ಮತ್ತು ಸರ್ದಾರ್ ಪಟೇಲ್ ಅವರ ಬದುಕು ದೇಶಸೇವೆ, ತ್ಯಾಗ ಹಾಗೂ ರಾಷ್ಟ್ರೀಯ ಏಕತೆಯ ಪ್ರತೀಕವಾಗಿದೆ. ಯುವಜನರು ಮಹನೀಯರ ಆದರ್ಶಗಳನ್ನು ಅಳವಡಿಸಿಕೊಂಡು ಪ್ರಜಾಪ್ರಭುತ್ವ, ಸಾಮಾಜಿಕ ಸಾಮರಸ್ಯ ಮತ್ತು ದೇಶದ ಸಮಗ್ರತೆ ಕಾಪಾಡಲು ಮುಂದಾಗಬೇಕು ಎಂದು ಕರೆ ನೀಡಿದರು.

ಮಹಾನ್ ನಾಯಕರ ಸ್ಮರಣೆ ಕೇವಲ ಆಚರಣೆಗೆ ಸೀಮಿತವಾಗದೆ, ಅವರ ಚಿಂತನೆಗಳನ್ನು ಸಮಾಜಮುಖಿ ಕಾರ್ಯಗಳ ಮೂಲಕ ಅನುಷ್ಠಾನಗೊಳಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ನರಸಿಂಹಲು ಮಾಡಗಿರಿ, ದರೂರು ಬಸವರಾಜ ಪಾಟೀಲ್, ತಾಯಣ್ಣ ನಾಯಕ, ಅಬ್ದುಲ್ ಕರೀಂ, ಭೀಮನಗೌಡ ನಾಗಡದಿನ್ನಿ, ರಾಮಕೃಷ್ಣ ನಾಯಕ, ವಿಶ್ವನಾಥ ಪಟ್ಟಿ, ರಮೇಶ ಯಾದವ, ಸುಧೀಂದ್ರ ಜಹಾಗೀರದಾರ, ಫಯಾಜುದ್ದೀನ್, ರಾಣಿ ರಿಚರ್ಡ್, ಶಶಿಕಲಾ ಭೀಮರಾಯ, ಮಂಜುಳಾ ಅಮರೇಶ, ಪಿ. ಸುರೇಖಾ, ರಜಿಯಾ ಪಟೇಲ್, ಹರೀಶಾ ಬೇಗಮ್, ನೂರಜಾಹ, ಮಲ್ಲಿಕಾರ್ಜುನ ನಾಯಕ, ಬಸವರಾಜ ವಕೀಲ, ಜಿ. ಕೇಶವಮೂರ್ತಿ, ಕೆ.ಟಿ. ಶ್ರೀನಿವಾಸ, ವೆಂಕಟೇಶ ಮಂಚಲಾಪುರ, ಶಂಕರ ಹೊಸೂರು, ಲಕ್ಷ್ಮಣ ಮ್ಯಾದಾರ, ಎನ್. ಜಂಬಣ್ಣ ಭಂಡಾರಿ, ಅಮರೇಶ ಭಂಡಾರಿ, ಎಸ್. ರವೀಂದ್ರನಾಥ, ಎಂ.ಡಿ. ಜಾವೀದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K